ಕರ್ನಾಟಕ ಸರ್ಕಾರ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

# ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್

**ಸಂವಹನ ಮತ್ತು ಸಾಮರ್ಥ್ಯ ಅಭಿವೃದ್ಧಿ ಘಟಕ**

ಸಂಖ್ಯೆ : ಗ್ರಾಅಪ/ರಾನೀನೈಮಿ/ಎನ್‌ಬಿಎ/ಸುತ್ತೋಲೆ-22/2013-14/313 ದಿನಾಂಕ :17.09.2013

## ಸುತ್ತೋಲೆ

***ವಿಷಯ:*** ನಿರ್ಮಲ ಭಾರತ ಅಭಿಯಾನ ಕಾರ್ಯಕ್ರಮದ ಯಶಸ್ವಿ ಅನುಷ್ಠಾನಕ್ಕೆ ಪ್ರತಿಯೊಂದು ಹೋಬಳಿಗೆ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ನೋಡಲ್ ಅಧಿಕಾರಿಯಾಗಿ ನೇಮಿಸುವ ಕುರಿತು.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಗ್ರಾಮೀಣ ಪ್ರದೇಶದಲ್ಲಿ ಬಯಲು ಮಲ ವಿಸರ್ಜನೆ ಮುಕ್ತಗೊಳಿಸಿ ಜನರಿಗೆ ಉತ್ತಮ ಆರೋಗ್ಯ ನೀಡುವು ನಿಟ್ಟಿನಲ್ಲಿ ಸರ್ಕಾರವು ವಿವಿಧ ಯೋಜನೆಗಳ ಹೆಸರಲ್ಲಿ ಗ್ರಾಮೀಣ ಕುಟುಂಬಗಳಿಗೆ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ ಪ್ರೇರೇಪಣೆ ಮಾಡಿದರೂ ಆಶಾದಾಯಕ ಪ್ರಗತಿ ಸಾಧಿಸುವಲ್ಲಿ ವಿಫಲವಾಗಿರುವುದನ್ನು ಮನಗಂಡು, 12ನೇ ಪಂಚವಾರ್ಷಿಕ ಯೋಜನೆಯ ಅವಧಿಯ (2012-13 ರಿಂದ 2016-17)ಲ್ಲಾದರೂ ಉತ್ತಮ ಫಲಿತಾಂಶ ನಿರೀಕ್ಷಿಸಿ ನಿರ್ಮಲ ಭಾರತ ಅಭಿಯಾನ ಕಾರ್ಯಕ್ರಮವನ್ನು ಜಾರಿಗೆ ತರಲಾಗಿದೆ.

2012-13ನೇ ಸಾಲಿನಲ್ಲಿ ನಡೆಸಿದ ಬೇಸ್ ಲೈನ್ ಸರ್ವೆಯಲ್ಲಿ ಶೌಚಾಲಯ ಹೊಂದಿರದ ಫಲಾನುಭವಿಗಳನ್ನು ಗುರುತಿಸಲಾಗಿದ್ದು ಸೂಕ್ತವಾದ ಕಾರ್ಯತಂತ್ರದ ಮೂಲಕ ಶೌಚಾಲಯವನ್ನು ನಿರ್ಮಿಸಿ ಬಳಸುವಂತೆ ಪ್ರೇರೇಪಿಸುವ ಮಹತ್ವದ ಕಾರ್ಯನಿರ್ವಹಣೆಯನ್ನು ಸೂಕ್ತವಾಗಿ ಮೇಲ್ವಿಚಾರಣೆಮಾಡಲು **ವಿವಿದ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು, ಜಿಲ್ಲೆಯ ಪ್ರತಿಯೊಂದು ಹೋಬಳಿಗೂ ನೋಡಲ್ ಅಧಿಕಾರಿಗಳನ್ನಾಗಿ ನೇಮಿಸುವುದು**, ಅದರಂತೆ ಸಂಬಂಧ ಪಟ್ಟ ನೋಡಲ್ ಅಧಿಕಾರಿಗಳು ತಮ್ಮ ಹೋಬಳಿ ವ್ಯಾಪ್ತಿಯಲ್ಲಿ ಬರುವ ಎಲ್ಲ ಗ್ರಾಮ ಪಂಚಾಯಿತಿಗಳ, ಎಲ್ಲಾ ಮನೆಗಳಲ್ಲಿ, ಪ್ರತೀ ಶಾಲೆ ಮತ್ತು ಅಂಗನವಾಡಿಗಳಲ್ಲಿ ಸೂಕ್ತವಾದ ಶೌಚಾಲಯ ನಿರ್ಮಾಣ, ನಿರ್ವಹಣೆ ಹಾಗೂ ಬಳಕೆಗೆ ಆದ್ಯತೆ ನೀಡಿ, ಮೇಲ್ವಿಚಾರಣೆ ಕಾರ್ಯನಿರ್ವಹಿಸುವುದು. ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳನ್ನು ನಿರ್ಮಲ ಗ್ರಾಮ ಪಂಚಾಯಿತಿಗಳನ್ನಾಗಿ ರೂಪಿಸಲು ಅಗತ್ಯ ಕ್ರಮಕೈಗೊಳ್ಳುವುದು.

**ನೋಡಲ್ ಅಧಿಕಾರಿಗಳು ಕೆಳಕಂಡ ಜವಾಬ್ದಾರಿಗಳನ್ನು ನಿರ್ವಹಿಸಬೇಕಾಗುತ್ತದೆ.**

1. ಕಾರ್ಯಕ್ಷೇತ್ರದ ನೇತೃತ್ವ.
2. ವಾರದಲ್ಲಿ ಒಂದು ಗ್ರಾಮ ಪಂಚಾಯಿತಿಗೆ ಬೇಟಿ ನೀಡುವುದು ಹಾಗೂ ಆರ್ಥಿಕ ಮತ್ತು ಭೌತಿಕ ಪ್ರಗತಿ ಪರಿಶೀಲನೆ ನಡೆಸುವುದು.
3. ಕ್ಷೇತ್ರ ವ್ಯಾಪ್ತಿಯ ಗ್ರಾಮಗಳು, ಶಾಲೆ, ಅಂಗನವಾಡಿ, ಆರೋಗ್ಯ ಕೇಂದ್ರ ಇನ್ನಿತರೆ ಸರ್ಕಾರಿ, ಅರೆಸರ್ಕಾರಿ, ಖಾಸಗಿ ಕಾರ್ಯಾಲಯಗಳಲ್ಲಿ ಸಮರ್ಪಕ ನೀರು ಸರಬರಾಜು ಮತ್ತು ನೈರ್ಮಲ್ಯ ಸೌಲಭ್ಯಗಳ ನಿರ್ವಹಣೆ ಖಾತರಿ ಪಡಿಸುವುದು.
4. ಚುನಾಯಿತ ಹಾಗೂ ಗ್ರಾಮ ಪಂಚಾಯತಿಗಳಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಪ್ರತೀ15 ದಿನಗಳಿಗೆ ಪ್ರಗತಿ ಪರಿಶೀಲನೆ ನಡೆಸುವುದು.
5. ಸಮರ್ಪಕವಾಗಿ ಅನುಷ್ಠಾನಗೊಳಿಸಲು ಬೇಕಾದಂತಹ ಐ.ಇ.ಸಿ ಮತ್ತು ರೂಪಿಸಿರುವ ತರಬೇತಿ ಕಾರ್ಯಕ್ರಮಗಳ ಕ್ರಿಯಾಯೋಜನೆ ಅನುಷ್ಠಾನಗೊಳಿಸುವುದು.
6. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಎಲ್ಲಾ ಕುಟುಂಬಗಳು ವೈಯಕ್ತಿಕ ಶೌಚಾಲಯ ನಿರ್ಮಿಸಿಕೊಂಡು ಬಳಕೆ ಮಾಡುವಂತೆ ಉತ್ತೇಜಿಸುವುದು ಹಾಗೂ ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯ ಸೌಲಭ್ಯದೊಂದಿಗೆ ನಿರ್ಮಲ ಭಾರತ ಅಭಿಯಾನ ಯೋಜನೆಯಡಿ ಮುಂದಿನ ಮಾರ್ಚ ಅಂತ್ಯದೊಳಗೆ 2013-14ನೇ ಸಾಲಿನ ಗುರಿಯಂತೆ ವೈಯಕ್ತಿಕ ಶೌಚಾಲಯ ನಿರ್ಮಾಣವನ್ನು ಪೂರ್ಣಗೊಳಿಸುವುದು. ಇದಕ್ಕಾಗಿ ಸಂಪೂರ್ಣ ಮಾಹಿತಿ ಕಲೆಹಾಕಿ, ಕ್ರಿಯಾ ಯೋಜನೆ ರೂಪಿಸಿ ಅನುಷ್ಠಾನ ಕಾರ್ಯವನ್ನು ತಕ್ಷಣ ಪ್ರಾರಂಭಿಸುವುದು.

ಪು.ತಿ.ನೊ ....1

7. ವರದಿಯನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಲ್ಲಿಸುವುದು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ಪ್ರಗತಿ ಸಾಧಿಸಲು ಕ್ರಮಕೈಗೊಳ್ಳುವುದು.

**ಪ್ರತೀ ಮಾಹೆ ನೋಡಲ್ ಅಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ನಡೆಸಿ ವರದಿಯನ್ನು ಹಾಗೂ ದಿನಾಂಕ 25.09.2013ರೊಳಗೆ ನೋಡಲ್ ಅಧಿಕಾರಿಗಳ ನೇಮಕಾತಿ ಪ್ರಕ್ರಿಯೆಯನ್ನು ಅಂತಿಮಗೊಳಿಸಿ ರಾಜ್ಯ ಕಛೇರಿಗೆ ಸಲ್ಲಿಸಲು ಸೂಚಿಸಿದೆ.**

ತಮ್ಮ ವಿಶ್ವಾಸಿ

**(ಟಿ.ಎಂ. ವಿಜಯ ಬಾಸ್ಕರ್)**
ಪ್ರಧಾನ ಕಾರ್ಯದರ್ಶಿಗಳು
ಗ್ರಾ. ಅ ಮತ್ತು ಪಂಚಾಯತ್ ರಾಜ್ ಇಲಾಖೆ.

**ರವರಿಗೆ,**
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
ಎಲ್ಲಾ ಜಿಲ್ಲಾ ಪಂಚಾಯತಿಗಳು,

**ಪ್ರತಿಯನ್ನು,**

1. ಕಾರ್ಯದರ್ಶಿಗಳು (ಪಂ.ರಾ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಮಾಹಿತಿಗಾಗಿ.
2. ಮಿಷನ್ ನಿರ್ದೇಶಕರು, ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್ KRWSSA ಕಾವೇರಿ ಭವನ, ಬೆಂಗಳೂರು, ಇವರ ಮಾಹಿತಿಗಾಗಿ.

2ನೇ ಮಹಡಿ, ಕೆ.ಹೆಚ್.ಬಿ. ಬಿಲ್ಡಿಂಗ್, ಕಾವೇರಿಭವನ, ಬೆಂಗಳೂರು - 560 009.
ದೂರವಾಣಿ ಸಂ.22221861 : - ಫ್ಯಾಕ್ಸ್ :-22221862 E-mail : wsrdpr@gmail.com